**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀಯುತರುಗಳಾದ ನಿರಾಣಿ ಹಣಮಂತ್ ರುದ್ರಪ್ಪ, ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ, ಸರ್ಕಾರಿ ಮುಖ್ಯ ಸಚೇತಕರು, ಪ್ರದೀಪ್ ಶೆಟ್ಟರ್, ಬಿ.ಜಿ.ಪಾಟೀಲ್, ಎಸ್. ವಿ. ಸಂಕನೂರು ಇವರುಗಳು ನಿಯಮ 72ರ ಅಡಿಯಲ್ಲಿ ನೀಡಿರುವ ಸೂಚನೆಗೆ ವಿವರಗಳು**

**ವಿಷಯ: ಉತ್ತರ ಕರ್ನಾಟಕ ಭಾಗದಲ್ಲಿ ಲಕ್ಷಾಂತರ ಎಕರೆ ಜಮೀನುಗಳಿಗೆ ನೀರಾವರಿ ಸೌಲಭ್ಯವನ್ನು ಕಲ್ಪಿಸುವುದಕ್ಕಾಗಿ ಹಾಗೂ ಸಮಸ್ತ ಜನರ & ಜಾನುವಾರುಗಳ ಕುಡಿಯುವ ನೀರಿನ ಸಮಸ್ಯೆಯನ್ನು ಶಾಶ್ವತವಾಗಿ ಪರಿಹರಿಸುವುದಕ್ಕಾಗಿ ಆ ಭಾಗದಲ್ಲಿ "ಸಮಗ್ರ ನೀರಾವರಿ ಯೋಜನೆ"ಗಳನ್ನು ಹಮ್ಮಿಕೊಂಡು ಅನುಷ್ಠಾನಗೊಳಿಸುವ ವಿಷಯದ ಬಗ್ಗೆ ಉತ್ತರ.**

*****

ಕರ್ನಾಟಕ ರಾಜ್ಯದಲ್ಲಿ ಬೃಹತ್ ಮತ್ತು ಮಧ್ಯಮ ನೀರಾವರಿ ಯೋಜನೆಗಳಿಂದ ಒಟ್ಟಾರೆ ಎಕರೆ (40.66 ಲಕ್ಷ ಹೆಕ್ಟೇರ್) ಕ್ಷೇತ್ರ ನೀರಾವರಿ ಸೌಲಭ್ಯಕ್ಕೆ ಒಳಪಡಿಸುವುದಾಗಿದ್ದು, ಈ ಪೈಕಿ ಇದುವರೆಗೂ 29.78 ಲಕ್ಷ ಹೆಕ್ಟೇರ್ ಕ್ಷೇತ್ರ ನೀರಾವರಿ ಸೌಲಭ್ಯ ಕಲ್ಪಿಸಲಾಗಿರುತ್ತದೆ.

ರಾಜ್ಯದ ಉತ್ತರ ಕರ್ನಾಟಕ ಭಾಗದಲ್ಲಿ ಕೃಷ್ಣಾ ಹಾಗೂ ಗೋದಾವರಿ ಕಣಿವೆ ಪಾತ್ರದಡಿ ರಾಜ್ಯಕ್ಕೆ ಹಂಚಿಕೆಯಾಗಿರುವ ನೀರಿನ ಬಳಕೆಗೆ ನೀರಾವರಿ ಯೋಜನೆಗಳನ್ನು ರೂಪಿಸಿ, ಯೋಜನೆಗಳನ್ನು ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಹಾಗೂ ಕರ್ನಾಟಕ ನೀರಾವರಿ ನಿಗಮಗಳಡಿ ಅನುಷ್ಠಾನಗೊಳಿಸಲಾಗುತ್ತಿದೆ.

ಉತ್ತರ ಕರ್ನಾಟಕದಲ್ಲಿ ಕೃಷ್ಣಾ ಕಣಿವೆ ಹಾಗೂ ಗೋದಾವರಿ ಕಣಿವೆ ಪಾತ್ರದಲ್ಲಿ ಒಟ್ಟಾರೆ ಒಟ್ಟಾರೆ 107 ನೀರಾವರಿ/ಕೆರೆ ತುಂಬಿಸುವ/ಆಧುನೀಕರಣ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಈ ಪೈಕಿ 28 ನೀರಾವರಿ/ಕೆರೆ ತುಂಬಿಸುವ ಯೋಜನೆಗಳು ಪೂರ್ಣಗೊಂಡಿವೆ. ಬಾಕಿ ಯೋಜನೆಗಳು ಪ್ರಗತಿಯ ವಿವಿಧ ಹಂತಗಳಲ್ಲಿರುತ್ತವೆ. ಒಟ್ಟಾರೆ ಉತ್ತರ ಕರ್ನಾಟಕದಲ್ಲಿ ಕೈಗೊಂಡಿರುವ ಎಲ್ಲಾ ಯೋಜನೆಗಳ ಅಂದಾಜು ಮೊತ್ತ ಸುಮಾರು ರೂ.1,20,991 ಕೋಟಿಗಳಾಗಿದ್ದು, ಇದೂವರೆಗೂ ರೂ.61,386 ಕೋಟಿ ವೆಚ್ಚ ಆಗಿರುತ್ತದೆ. ಪ್ರಗತಿಯಲ್ಲಿರುವ ಯೋಜನೆಗಳನ್ನು ಪೂರ್ಣಗೊಳಿಸಲು ಸುಮಾರು ರೂ.59,605 ಕೋಟಿ ಅಗತ್ಯವಿರುತ್ತದೆ. ಉತ್ತರ ಕರ್ನಾಟಕದಲ್ಲಿ ನೀರಾವರಿ ಯೋಜನೆಗಳ ಅನುಷ್ಠಾನದಿಂದ ಒಟ್ಟು ಯೋಜಿತ 25,53,200 ಹೆ. ಪೈಕಿ ಇದೂವರೆಗೂ 16,91,622 ಹೆ. ನೀರಾವರಿ ಸಾಮರ್ಥ್ಯ ಕಲ್ಪಿಸಲಾಗಿದೆ.

ಉತ್ತರ ಕರ್ನಾಟಕದಲ್ಲಿ ಪ್ರಮುಖವಾಗಿ, ಕೃಷ್ಣಾ ಮೇಲ್ದಂಡೆ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಈಗಾಗಲೇ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-1 ಮತ್ತು ಹಂತದ-2 ಯೋಜನೆ ಪೂರ್ಣಗೊಂಡಿದ್ದು, 15.31 ಲಕ್ಷ ಎಕರೆ (6.20 ಲಕ್ಷ ಹೆಕ್ಟೇರ್) ಅಚ್ಚುಕಟ್ಟು ಕ್ಷೇತ್ರಕ್ಕೆ ನೀರಾವರಿ ಸೌಲಭ್ಯ ಒದಗಿಸಲಾಗಿದೆ.

ಕೃಷ್ಣಾ ನ್ಯಾಯಾಧಿಕರಣ -2 ರ ತೀರ್ಪಿನನ್ವಯ ರಾಜ್ಯಕ್ಕೆ ಹಂಚಿಕೆಯಾದ ಒಟ್ಟು 173 ಟಿ.ಎಂ.ಸಿ. ನೀರಿನಲ್ಲಿ ಪ್ರಮುಖವಾಗಿ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ರ ಯೋಜನೆ ಅನುಷ್ಠಾನಕ್ಕಾಗಿ ಹಂಚಿಕೆಯಾದ 130 ಟಿ.ಎಂ.ಸಿ. ನೀರಿನ ಬಳಕೆಗಾಗಿ ಆಲಮಟ್ಟಿ ಜಲಾಶಯದ ನೀರಿನ ಸಂಗ್ರಹಣೆ ಮಟ್ಟವನ್ನು ಆರ್.ಎಲ್. 519.60 ಮೀ.ನಿಂದ ಆರ್.ಎಲ್. 524.256 ಮೀ.ಗೆ ಎತ್ತರಿಸುವುದಾಗಿದ್ದು, ಯೋಜನೆಯಡಿ 9 ಉಪ ಯೋಜನೆಗಳ ಅನುಷ್ಠಾನದಿಂದ ಉತ್ತರ ಕರ್ನಾಟಕದ ವಿಜಯಪುರ, ಬಾಗಲಕೋಟ, ಕಲಬುರ್ಗಿ, ಯಾದಗಿರಿ, ರಾಯಚೂರು, ಕೊಪ್ಪಳ ಹಾಗೂ ಗದಗ ಜಿಲ್ಲೆಗಳಡಿ ಒಟ್ಟಾರೆ 14.67 ಲಕ್ಷ ಎಕರೆ (5.94 ಲಕ್ಷ ಹೆಕ್ಟೇರ್) ಅಚ್ಚುಕಟ್ಟು ಪ್ರದೇಶಗಳಿಗೆ ನೀರಾವರಿ ಸೌಲಭ್ಯ ಕಲ್ಪಿಸುವುದಾಗಿರುತ್ತದೆ.

ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ರ ಯೋಜನೆ ಅನುಷ್ಠಾನಕ್ಕಾಗಿ ಹಂಚಿಕೆಯಾದ 130 ಟಿ.ಎಂ.ಸಿ. ನೀರಿನ ಬಳಕೆಯು ಕೃಷ್ಣಾ ನ್ಯಾಯಾಧಿಕರಣ-2ರ ಅಂತಿಮ ತೀರ್ಪಿನ ಅಧಿಸೂಚನೆಗೆ ಒಳಪಟ್ಟಿರುತ್ತದೆ. ಪ್ರಸ್ತುತ ಕೃಷ್ಣಾ ನ್ಯಾಯಾಧಿಕರಣ-2ರ ಅಂತಿಮ ತೀರ್ಪು ಇನ್ನೂ ಕೇಂದ್ರ ಸರ್ಕಾರದಿಂದ ಅಧಿಸೂಚನೆಗೊಂಡಿರುವುದಿಲ್ಲ. ಇದಲ್ಲದೆ, ಕೃಷ್ಣಾ ನ್ಯಾಯಾಧಿಕರಣ-2ರ ತೀರ್ಪಿನ ಕುರಿತಾಗಿ ಕರ್ನಾಟಕ, ತೆಲಂಗಾಣ ಮತ್ತು ಆಂಧ್ರಪ್ರದೇಶ ರಾಜ್ಯಗಳು ಸರ್ವೋಚ್ಚ ನ್ಯಾಯಾಲಯದಲ್ಲಿ ಸಲ್ಲಿಸಿರುವ ವಿಶೇಷ ಅನುಮತಿ ಅರ್ಜಿಗಳು ಇತ್ಯರ್ಥವಾಗಬೇಕಾಗಿರುತ್ತದೆ. ಕೃಷ್ಣಾ ನ್ಯಾಯಾಧಿಕರಣ-2ರ ಅಂತಿಮ ತೀರ್ಪು ಕೇಂದ್ರ ಸರ್ಕಾರದಿಂದ ಗೆಜೆಟ್ ಅಧಿಸೂಚನೆ ಹೊರಡಿಸಲು ಕೇಂದ್ರ ಸರ್ಕಾರದ ಜೊತೆಗೆ ಸಮನ್ವಯ ಸಾಧಿಸಲಾಗುತ್ತಿದ್ದು, ಎಲ್ಲಾ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಪ್ರಸ್ತುತ ಕೃಷ್ಣಾ ನ್ಯಾಯಾಧಿಕರಣ-2ರ ಅಂತಿಮ ತೀರ್ಪಿನ ಅಧಿಸೂಚನೆ ಕಾಯ್ದಿರಿಸಿ, ಸರ್ಕಾರದ ಆಡಳಿತಾತ್ಮಕ ಅನುಮೋದನೆ ಮೇರೆಗೆ, ರೂ.51,148.94 ಕೋಟಿ ಪರಿಷ್ಕೃತ ಅಂದಾಜು ಮೊತ್ತದ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ರ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಯೋಜನೆಯಡಿ ಕೈಗೆತ್ತಿಕೊಂಡಿರುವ ಎಲ್ಲಾ 9 ಉಪ ಯೋಜನೆಗಳ ಕಾಮಗಾರಿಗಳು ಪ್ರಗತಿಯ ವಿವಿಧ ಹಂತದಲ್ಲಿರುತ್ತವೆ.

ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3ರಡಿ ಒಟ್ಟಾರೆ 1.34 ಲಕ್ಷ ಎಕರೆ ಜಮೀನು ಭೂಸ್ವಾಧೀನ, ಮುಳುಗಡೆ ಹೊಂದುವ 20 ಗ್ರಾಮಗಳ ಮತ್ತು ಬಾಗಲಕೋಟೆ ಪಟ್ಟಣದ ಪುನರ್ ನಿರ್ಮಾಣದ ಕಾರ್ಯಗಳನ್ನು ಹೊಸ ಭೂಸ್ವಾಧೀನ ಕಾಯ್ದೆ 2013ರನ್ವಯ ಕೈಗೊಳ್ಳಬೇಕಾಗಿರುತ್ತದೆ. ಯೋಜನೆಯಡಿ ಪ್ರಮುಖವಾಗಿ ಮುಳುಗಡೆ ಹೊಂದುವ ಜಮೀನುಗಳಿಗೆ ರೈತರು ಏಕರೂಪ ಭೂಪರಿಹಾರಕ್ಕಾಗಿ ಆಗ್ರಹಿಸುತ್ತಿದ್ದು, ಈ ನಿಟ್ಟಿನಲ್ಲಿ ಏಕರೂಪ ಭೂಪರಿಹಾರ ನಿಗದಿಪಡಿಸುವ ಕುರಿತಾಗಿ ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟದ ಉಪಸಮಿತಿಯನ್ನು ರಚಿಸಲಾಗಿರುತ್ತದೆ. ಪ್ರಸ್ತುತ ಇದೂವರೆಗೂ ಸುಮಾರು 20,000 ಎಕರೆ ಜಮೀನು ಭೂಸ್ವಾಧೀನ ಮಾಡಿಕೊಳ್ಳಲಾಗಿರುತ್ತದೆ.

ಇದೂವರೆಗೂ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3 ಯೋಜನೆಯಡಿ ಸುಮಾರು 83,510 ಹೆ. ಅಚ್ಚುಕಟ್ಟು ಕ್ಷೇತ್ರಕ್ಕೆ ಔಟ್‌ಲೆಟ್ ನೀರಾವರಿ ಸಾಮರ್ಥ್ಯ ಕಲ್ಪಿಸಲಾಗಿರುತ್ತದೆ ಹಾಗೂ ಯೋಜನೆಗೆ ಪ್ರಾರಂಭದಿಂದ ಇದೂವರೆಗೂ ರೂ.12,500.37 ಕೋಟಿ ವೆಚ್ಚ ಮಾಡಲಾಗಿರುತ್ತದೆ.

ಉತ್ತರ ಕರ್ನಾಟಕದ ಜಲಾನಯನ ಪ್ರದೇಶದಲ್ಲಿ ಬರುವ ಸಣ್ಣ ನೀರಾವರಿ/ ಜಿಲ್ಲಾ ಪಂಚಾಯತ್ ಕೆರೆಗಳನ್ನು ನದಿ ಪಾತ್ರಗಳಿಂದ ನೀರನ್ನು ಲಿಫ್ಟ್ ಮಾಡಿ ಹಾಗೂ ಕೆಲವು ನೀರಾವರಿ ಯೋಜನೆಗಳ ಅಚ್ಚುಕಟ್ಟು ವ್ಯಾಪ್ತಿಯಡಿ ಗುರುತ್ವಾಕರ್ಷಣೆ ಮುಖಾಂತರ ಕಾಲುವೆ ಜಾಲಗಳಿಂದ ಕೆರೆಗಳನ್ನು ತುಂಬಿಸುವ ಯೋಜನೆಗಳ ಅನುಷ್ಠಾನಕ್ಕೆ ಆದ್ಯತೆ ನೀಡಲಾಗಿರುತ್ತದೆ. ಕೃಷ್ಣಾ ಭಾಗ್ಯ ಜಲ ನಿಗಮ ಮತ್ತು ಕರ್ನಾಟಕ ನೀರಾವರಿ ನಿಗಮಗಳಡಿ ಅನುಷ್ಠಾನಗೊಂಡಿರುವ/ ಅನುಷ್ಠಾನಗೊಳಿಸಲಾಗುತ್ತಿರುವ ಕೆರೆ ತುಂಬಿಸುವ ಯೋಜನೆಗಳಿಂದ ಅವಶ್ಯಕ ಕುಡಿಯುವ ನೀರು ಪೂರೈಕೆಗೆ ಮತ್ತು ಅಂತರ್ಜಲದ ಪುನಶ್ಚೇತನಕ್ಕೆ ಸಹಕಾರಿಯಾಗಲಿದೆ.

**ಒಟ್ಟಾರೆ, ಉತ್ತರ ಕರ್ನಾಟಕ ಭಾಗದಲ್ಲಿ ನೀರಾವರಿ ಸೌಲಭ್ಯವನ್ನು ಕಲ್ಪಿಸುವುದಕ್ಕಾಗಿ ಹಾಗೂ ಕುಡಿಯುವ ನೀರಿನ ಸಮಸ್ಯೆಯನ್ನು ಶಾಶ್ವತವಾಗಿ ಪರಿಹರಿಸುವುದಕ್ಕಾಗಿ ಎಲ್ಲಾ ಯೋಜಿತ ನೀರಾವರಿ ಯೋಜನೆಗಳು ಹಾಗೂ ಕೆರೆ ತುಂಬುವ ಯೋಜನೆಗಳ ಅನುಷ್ಠಾನಕ್ಕೆ ಅಗತ್ಯ ಅನುದಾನ ಒದಗಿಸುವುದರೊಂದಿಗೆ ಆದ್ಯತೆ ನೀಡಿ ಸಮಗ್ರ ನೀರಾವರಿ ಸೌಲಭ್ಯ ಕಲ್ಪಿಸುವುದರ ಜೊತೆಗೆ ಉತ್ತರ ಕರ್ನಾಟಕವನ್ನು ಬರಮುಕ್ತ ಮಾಡುವ ನಿಟ್ಟಿನಲ್ಲಿ ಸರ್ಕಾರವು ಬದ್ಧವಾಗಿದೆ.**

(ಬಿ.ಎಸ್.ಯಡಿಯೂರಪ್ಪ)

ಮುಖ್ಯಮಂತ್ರಿ